**ಕರ್ನಾಟಕ ವಿಧಾನಪರಿಷತ್ತು**

**135ನೇ ಅಧಿವೇಶನ**

| | | |
|---|---|---|
| ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | : | 144 |
| ಸದಸ್ಯರ ಹೆಸರು | : | ಶ್ರೀ ರಘುನಾಥರಾವ್ ಮಲ್ಕಾಪೂರೆ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 10-07-2018 |
| ಉತ್ತರಿಸುವ ಸಚಿವರು | : | ಮಾನ್ಯ ಲೋಕೋಪಯೋಗಿ ಸಚಿವರು |

<table>
<tr><th>ಕ್ರ ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಲೋಕೋಪಯೋಗಿ ಇಲಾಖೆ ಎಷ್ಟು ಕಿ.ಮೀ. ರಾಜ್ಯ ಹೆದ್ದಾರಿ ಮತ್ತು ಜಿಲ್ಲಾ ಮುಖ್ಯ ರಸ್ತೆಗಳನ್ನು ನಿರ್ವಹಣೆ ಮಾಡುತ್ತಿದೆ; ಈ ಹೆದ್ದಾರಿಗಳು ಮತ್ತು ಜಿಲ್ಲಾ ಮುಖ್ಯ ರಸ್ತೆಗಳು ಯಾವ್ಯಾವ ಊರುಗಳಿಗೆ ಮತ್ತು ಯಾವ್ಯಾವ ಅಂತರರಾಜ್ಯಗಳಿಗೆ ಸಂಪರ್ಕವನ್ನು ಕಲ್ಪಿಸುತ್ತಿವೆ; (ಸ್ಪಷ್ಟ ಮಾಹಿತಿ ನೀಡುವುದು)</td><td>ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಯಲ್ಲಿನ ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ಮುಖ್ಯ ರಸ್ತೆ ಉದ್ದದ ವಿವರ ಕೆಳಕಂಡಂತಿದೆ:<br>(ಕಿ.ಮೀ.ಗಳಲ್ಲಿ)<br><table><tr><th>ರಾಜ್ಯ ಹೆದ್ದಾರಿ ರಸ್ತೆ</th><th>ಜಿಲ್ಲಾ ಮುಖ್ಯ ರಸ್ತೆ</th></tr><tr><td>19578</td><td>49909</td></tr></table><br>ಮೇಲ್ಕಂಡ ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ಮುಖ್ಯ ರಸ್ತೆಗಳನ್ನು ಸಂಪರ್ಕಿಸುವ ಊರು ಮತ್ತು ಅಂತರ ರಾಜ್ಯಗಳ ವಿವರಗಳನ್ನು ಅನುಬಂಧ-1ರಲ್ಲಿ ಒದಗಿಸಿದೆ.</td></tr>
<tr><td>ಆ</td><td>ಕಳೆದ ಮೂರು ವರ್ಷಗಳ ಅವಧಿಯಲ್ಲಿ ಸರ್ಕಾರವು ಪ್ರತಿ ವರ್ಷ ಈ ರಸ್ತೆಗಳ ನಿರ್ವಹಣೆಗಾಗಿ ವೆಚ್ಚ ಮಾಡಿರುವ ಹಣವೆಷ್ಟು; (ವಿಧಾನ ಸಭಾ / ಕ್ಷೇತ್ರವಾರು ಅಂಕಿಅಂಶಗಳನ್ನು ಒದಗಿಸುವುದು)</td><td>2015-16, 2016-17 ಮತ್ತು 2017-18ನೇ ಸಾಲಿನಲ್ಲಿ ರಸ್ತೆಗಳ ನಿರ್ವಹಣೆಗಾಗಿ ಭರಿಸಲಾಗಿರುವ ವೆಚ್ಚದ ತಾಲ್ಲೂಕುವಾರು ಮತ್ತು ವಿಧಾನಸಭಾ ಕ್ಷೇತ್ರವಾರು ವಿವರಗಳನ್ನು ಅನುಬಂಧ-2ರಲ್ಲಿ ಒದಗಿಸಿದೆ.</td></tr>
<tr><td>ಇ</td><td>ಜಿಲ್ಲೆಯ ಬಹುತೇಕ ರಾಜ್ಯ ಹೆದ್ದಾರಿಗಳು ಮತ್ತು ಎಂ.ಡಿ.ಆರ್ ರಸ್ತೆಗಳು ಹಾಳಾಗಿದ್ದು, ಈ ರಸ್ತೆಗಳ ದುರಸ್ತಿ ಮತ್ತು ನಿರ್ವಹಣೆ ಸಲುವಾಗಿ ಕಳೆದ ಎರಡು ವರ್ಷಗಳಲ್ಲಿ ಬಿಡುಗಡೆ ಮಾಡಿದ ಹಣವೆಷ್ಟು; (ವಿವರ ಒದಗಿಸುವುದು)</td><td>2016-17 ಮತ್ತು 2017-18ನೇ ಸಾಲಿನಲ್ಲಿ ರಾಜ್ಯ ಹೆದ್ದಾರಿ ಮತ್ತು ಜಿಲ್ಲಾ ಮುಖ್ಯ ರಸ್ತೆ ನಿರ್ವಹಣೆ ಮತ್ತು ದುರಸ್ತಿ ಕಾಮಗಾರಿಗಳಿಗೆ ಬಿಡುಗಡೆ ಮಾಡಲಾದ ಅನುದಾನದ ವಿವರ ಕೆಳಕಂಡಂತಿದೆ:<br>(ರೂ.ಲಕ್ಷಗಳಲ್ಲಿ)<br><table><tr><th rowspan="2">ಯೋಜನೆ</th><th colspan="2">ಬಿಡುಗಡೆ ಮಾಡಲಾದ ಹಣ</th></tr><tr><th>2016-17</th><th>2017-18</th></tr><tr><td>ರಾಜ್ಯ ಹೆದ್ದಾರಿ ರಸ್ತೆ ನಿರ್ವಹಣೆ</td><td>30800.00</td><td>30222.00</td></tr><tr><td>ಜಿಲ್ಲಾ ಮುಖ್ಯ ರಸ್ತೆ ನಿರ್ವಹಣೆ</td><td>36441.00</td><td>37911.00</td></tr><tr><td>ಒಟ್ಟು</td><td>67241.00</td><td>68133.00</td></tr></table></td></tr>
<tr><td>ಈ</td><td>ಈ ರಸ್ತೆಗಳನ್ನು ಎಷ್ಟು ಅವಧಿಯಲ್ಲಿ ದುರಸ್ತಿ ಮಾಡಲಾಗುವುದು; ಪ್ರಸಕ್ತ ಸಾಲಿನಲ್ಲಿ ಹೊಸ ರಾಜ್ಯ ಹೆದ್ದಾರಿಗಳನ್ನು ನಿರ್ವಹಿಸುವ ಪ್ರಸ್ತಾವನೆ ರಾಜ್ಯ ಸರ್ಕಾರದ ಮುಂದೆ ಇದೆಯೇ; (ತಾಲ್ಲೂಕುವಾರು ಅಂಕಿ ಅಂಶಗಳೊಂದಿಗೆ ಮಾಹಿತಿ ಒದಗಿಸುವುದು)</td><td>ಹಾಳಾಗಿರುವ ರಸ್ತೆಗಳನ್ನು ಪ್ರಸಕ್ತ ಆರ್ಥಿಕ ವರ್ಷದ ಅಂತ್ಯದೊಳಗಾಗಿ ದುರಸ್ತಿಪಡಿಸಲು ಕ್ರಮವಹಿಸಲಾಗುವುದು.<br><br>2018-19ನೇ ಸಾಲಿನಲ್ಲಿ ಹೊಸ ರಾಜ್ಯ ಹೆದ್ದಾರಿಗಳನ್ನು ನಿರ್ಮಿಸುವ ಪ್ರಸ್ತಾವನೆ ಇರುವುದಿಲ್ಲ.</td></tr>
</table>

**ಲೋಇ/415/ಐಎಫ್ಎ/2018**

(ಹೆಚ್.ಡಿ. ರೇವಣ್ಣ)
ಲೋಕೋಪಯೋಗಿ ಸಚಿವರು